ಕನ್ನಡಪ್ರಭ

# ಕನಿಷ್ಠ 60 ದಿನ ಅಧಿವೇಶನ ಕಡ್ಡಾಯ ಮಾಡಿ: ಸಭಾಪತಿ ಹೊರಟ್ಟಿ ಮನವಿ

## 10ನೇ ಕಾಮನ್ವೆಲ್ತ್ ಸಂಸದೀಯ ಸಮ್ಮೇಳನದಲ್ಲಿ ಭಾಗಿ ಲೋಕಸಭಾ ಸ್ಪೀಕರ್‌ಗೆ ಮನವಿ ಸಲ್ಲಿಸಿದ ಹೊರಟ್ಟಿ

**ನವದೆಹಲಿ:** ಶಾಸನ ಸಭೆಗಳು ಜನಸಾಮಾನ್ಯರ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತ ವೇದಿಕೆಗಳಾಗಿದ್ದು, ವಾರ್ಷಿಕವಾಗಿ ಕನಿಷ್ಠ 60 ದಿನ ಅಧಿವೇಶನ ನಡೆಸುವುದನ್ನು ಕಡ್ಡಾಯಗೊಳಿಸಬೇಕು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಲೋಕ ಸಭಾಧ್ಯಕ್ಷರಿಗೆ ಮನವಿ ಮಾಡಿದ್ದಾರೆ.



ನಗರದಲ್ಲಿ 10ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದ ಅಂಗವಾಗಿ ಸೋಮವಾರ ಜರುಗಿದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿ, ಪ್ರಜಾಪ್ರಭುತ್ವದಸಾರ್ಥಕತೆಗಾಗಿಪ್ರತಿವರ್ಷವೂಶಾಸನಸಭೆಗಳು ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸುವಂತೆ ಲೋಕಸಭೆ ಹಾಗೂ ರಾಜ್ಯಸಭೆಗಳು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು. ಶಾಸನ ಸಭೆಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಟಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವ ನಿಟ್ಟಿನಲ್ಲಿ ಸೂಕ್ತ ಕಾನೂನು ಕ್ರಮ ಅವಶ್ಯಕವಾಗಿದೆ. ಶಾಸನ ಸಭೆಗಳ ಸಚಿವಾಲಯಕ್ಕೆ ಸ್ವಾಯತ್ತ ಸ್ಥಾನ-ಮಾನ ನೀಡುವ ಕುರಿತು ಕಾನೂನು ಮೂಲಕ ಸೂಕ್ತ ನಿರ್ಧಾರ ಕೈಗೊಂಡು ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು ಎಂದು ಮನವಿ ಮಾಡಿದ್ದಾರೆ. ಸಮ್ಮೇಳನದಲ್ಲಿ ಲೋಕ ಸಭಾಧ್ಯಕ್ಷ ಓಂ ಬಿರ್ಲಾ, ಕರ್ನಾಟಕ ವಿಧಾನಸಭೆ ಸಭಾಧ್ಯಕ್ಷ ಯು.ಟಿ. ಖಾದರ್‌ಸೇರಿ ವಿವಿಧ ರಾಜ್ಯಗಳ ಸಭಾಧ್ಯಕ್ಷರು ಪಾಲ್ಗೊಂಡಿದ್ದರು.

ಪ್ರಜಾ ಪ್ರಗತಿ

## ಕನಿಷ್ಠ 60 ದಿನಗಳ ಅಧಿವೇಶನ ಕಡ್ಡಾಯಕ್ಕೆ ಸಭಾಪತಿ ಹೊರಟ್ಟಿ ಆಗ್ರಹ

# ಶಾಸನ ಸಭೆಗಳಿಗೆ ಆರ್ಥಿಕ ಸ್ವಾಯತ್ತತೆ ಅಗತ್ಯ

• ಪ್ರಜಾಪ್ರಗತಿ.ಕಾಂ

ನವದೆಹಲಿ : ಶಾಸನ ಸಭೆಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಟಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವುದು ಅಗತ್ಯವಾಗಿದ್ದು, ಆ ನಿಟ್ಟಿನಲ್ಲಿ ಸೂಕ್ತ ಕಾನೂನುಗಳಡಿ ಕಟ್ಟುನಿಟ್ಟಿನ ಕ್ರಮ ಅವಶ್ಯಕವಾಗಿದೆಂದು ಕರ್ನಾಟಕ ವಿಧಾನ ಪರಿಷತ್ತು ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹಪೂರ್ವಕ ಮನವಿ ಮಾಡಿದರು.




ನವದೆಹಲಿಯ ನೂತನ ಸಂಸದ ಭವನದಲ್ಲಿ ಎರಡು ದಿನಗಳ 10 ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದ ಅಂಗವಾಗಿ ಜರುಗಿದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಬಸವರಾಜ ಹೊರಟ್ಟಿ, ಶಾಸನ ಸಭೆಗಳ ಸಚಿವಾಲಯಕ್ಕೆ ಆರ್ಥಿಕ ಸ್ವಾಯತ್ತತೆ ಮತ್ತು ಸ್ವಾಯತ್ತ ಸ್ಥಾನ-ಮಾನ ನೀಡುವ ಕುರಿತು ಕಾನೂನು ಮೂಲಕ ಸೂಕ್ತ ನಿರ್ಧಾರ ಕೈಗೊಂಡು ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಲೋಕ ಸಭಾಧ್ಯಕ್ಷರು ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು

ಪ್ರತಿಯೊಂದು ಆರ್ಥಿಕ ಸಂಪನ್ಮೂಲಕ್ಕೂ ಸರಕಾರಗಳನ್ನು ಹಾಗೂ ಆರ್ಥಿಕ ಇಲಾಖೆ ಅಧಿಕಾರಿಗಳ ಮೊರೆ ಹೋಗುವುದು ಸೂಕ್ತವಾದುದಲ್ಲ, ಹಾಗೂ ಈ ಪ್ರಕ್ರಿಯೆಯಿಂದ ಆರ್ಥಿಕ ಅನುದಾನ ಪಡೆಯಲು ಅತೀ ಹೆಚ್ಚಿನ ಸಮಯ ಹಾಗೂ ಶ್ರಮದ ಅವಶ್ಯಕತೆಯಿದ್ದು ಅಲ್ಲದೇ ಇದರಿಂದ ಶಾಸನ ಸಭೆಗಳ ಸ್ವಾಯತ್ತತೆಗೆ ಅಡ್ಡಿ ಉಂಟಾಗುತ್ತಿದೆ ಎಂದು ವಿವರಿಸಿದರು.

ಶಾಸನ ಸಭೆ ಅಧಿವೇಶನಗಳ ಕುರಿತು ಪ್ರಸ್ತಾಪಿಸಿದ ಬಸವರಾಜ ಹೊರಟ್ಟಿ, ವಾರ್ಷಿಕವಾಗಿ ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸುವುದನ್ನು ಕಡ್ಡಾಯಗೊಳಿಸಬೇಕು. ಶಾಸನ ಸಭೆಗಳು ಜನಸಾಮಾನ್ಯರ ದೈನಂದಿನ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತವೇದಿಕೆಯಾಗಿವೆ ಆದ್ದರಿಂದ ಪ್ರತಿ ವರ್ಷವೂ ಶಾಸನಸಭೆಗಳು ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸಿ ಪ್ರಜಾಪ್ರಭುತ್ವದ ಸಾರ್ಥಕತೆಗೆ ಮುಂದಾಗುವಲ್ಲಿ ಲೋಕಸಭೆ ಹಾಗೂ ರಾಜ್ಯಸಭೆಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು. ಲೋಕ ಸಭಾಧ್ಯಕ್ಷ ಮಾನ್ಯ ಶ್ರೀ ಓಂಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನಾರಾಯಣ ಸಿಂಗ್, ಕರ್ನಾಟಕ ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಕರ್ನಾಟಕದ ಉಭಯ ಸದನದ ಕಾರ್ಯದರ್ಶಿ ಕೆ.ಆರ್.ಮಹಾಲಕ್ಷ್ಮೀ, ವಿಶಾಲಾಕ್ಷಿ, ಸೇರಿದಂತೆ, ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.

# ಕನಿಷ್ಠ 60 ದಿನ ಅಧಿವೇಶನ ಕಡ್ಡಾಯವಾಗಲಿ: ಹೊರಟ್ಟಿ

ಬೆಂಗಳೂರು: ಜನಸಾಮಾನ್ಯರ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸಲು ಅಧಿವೇಶನಗಳು ಸೂಕ್ತ ವೇದಿಕೆ ಆಗಿವೆ. ಈ ಹಿನ್ನೆಲೆಯಲ್ಲಿ ವಾರ್ಷಿಕವಾಗಿ ಕನಿಷ್ಠ 60 ದಿನಗಳ



ಕಾಲ ಅಧಿವೇಶನ ನಡೆ ಸುವುದನ್ನು ಕಡ್ಡಾಯಗೊಳಿಸುವ ಅವಶ್ಯಕತೆ ಇದೆ ಎಂದು ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಪ್ರತಿಪಾದಿಸಿದರು.

ದೆಹಲಿಯ ನೂತನ ಸಂಸದ ಭವನದಲ್ಲಿ ಸೋಮವಾರ ಆರಂಭಗೊಂಡ 2 ದಿನಗಳ 10ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿ, ಶಾಸನ ಸಭೆಗಳು ಜನಸಾಮಾನ್ಯರ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತ ವೇದಿಕೆಯಾಗಿವೆ ಎಂದರು.

## 10ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ

# ಶಾಸನ ಸಭೆಗಳಿಗೆ ಆರ್ಥಿಕ ಸ್ವಾಯತ್ತತೆ ನೀಡಿಕೆ–ಕನಿಷ್ಠ 60 ದಿನಗಳ ಅಧಿವೇಶನ ಕಡ್ಡಾಯ : ಸಭಾಪತಿ ಹೊರಟ್ಟಿ ಆಗ್ರಹ

**ನವದೆಹಲಿ:** ಶಾಸನ ಸಭೆಗಳ ಸ್ವತಂತ್ರ ನಿರ್ವಹಣೆ ಹಾಗೂ ಪಕ್ಷಾತೀತ ಕಾರ್ಯನಿರ್ವಹಣೆ ದೃಷ್ಟಿಯಿಂದ ಅವುಗಳಿಗೆ ಆರ್ಥಿಕ ಸ್ವಾಯತ್ತತೆ ನೀಡುವುದು ಅಗತ್ಯವಾಗಿದ್ದು, ಆ ನಿಟ್ಟಿನಲ್ಲಿ ಸೂಕ್ತ ಕಾನೂನುಗಳಡಿ ಕಟ್ಟುನಿಟ್ಟಿನ ಕ್ರಮ ಅವಶ್ಯಕವಾಗಿಎಂದು ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಮಾನ್ಯ ಬಸವರಾಜ ಹೊರಟ್ಟಿ ಆಗ್ರಹಪೂರ್ವಕ ಮನವಿ ಮಾಡಿದರು.



ನವದೆಹಲಿಯ ನೂತನ ಸಂಸದ ಭವನದಲ್ಲಿ ಇಂದಿನಿಂದ ಆರಂಭಗೊಂಡ ಎರಡು ದಿನಗಳ 10 ನೇ ಕಾಮನ್‌ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದ ಅಂಗವಾಗಿ ಜರುಗಿದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಬಸವರಾಜ ಹೊರಟ್ಟಿ, ಶಾಸನ ಸಭೆಗಳ ಸಚಿವಾಲಯಕ್ಕೆ ಆರ್ಥಿಕ ಸ್ವಾಯತ್ತತೆ ಮತ್ತು ಸ್ವಾಯತ್ತ ಸ್ಥಾನ–ಮಾನ ನೀಡುವ ಕುರಿತು ಕಾನೂನು ಮೂಲಕ ಸೂಕ್ತ ನಿರ್ಧಾರ ಕೈಗೊಂಡು ಸದನಗಳ ಗೌರವ, ಘನತೆ ಹಾಗೂ ಪ್ರಾಮುಖ್ಯತೆ ಹೆಚ್ಚಿಸಬೇಕು. ಈ ನಿಟ್ಟಿನಲ್ಲಿ ಲೋಕ ಸಭಾಧ್ಯಕ್ಷರು ಸೂಕ್ತ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಪ್ರತಿಯೊಂದು ಆರ್ಥಿಕ ಸಂಪನ್ಮೂಲಕ್ಕೂ ಸರಕಾರಗಳನ್ನು ಹಾಗೂ ಆರ್ಥಿಕ ಇಲಾಖೆ ಅಧಿಕಾರಿಗಳ ಮೊರೆ ಹೋಗುವುದು ಸೂಕ್ತವಾದುದಲ್ಲ, ಹಾಗೂ ಈ ಪ್ರಕ್ರಿಯೆಯಿಂದ ಆರ್ಥಿಕ ಅನುದಾನ ಪಡೆಯಲು ಅತೀ ಹೆಚ್ಚಿನ ಸಮಯ ಹಾಗೂ ಶ್ರಮದ ಅವಶ್ಯಕತೆಯಿದ್ದು ಇದರಿಂದ ಶಾಸನ ಸಭೆಗಳ ಸ್ವಾಯತ್ತತೆಗೆ ಅಡ್ಡಿ ಉಂಟಾಗುತ್ತಿದೆ ಎಂದು ವಿವರಿಸಿದರು.

ಶಾಸನ ಸಭೆ ಅಧಿವೇಶನಗಳ ಕುರಿತು ಪ್ರಸ್ತಾಪಿಸಿದ ಮಾನ್ಯಶ್ರೀ ಬಸವರಾಜ ಹೊರಟ್ಟಿ, ವಾರ್ಷಿಕವಾಗಿ ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸುವುದನ್ನು ಕಡ್ಡಾಯಗೊಳಿಸಬೇಕು. ಶಾಸನ ಸಭೆಗಳು ಜನಸಾಮಾನ್ಯರ ದೈನಂದಿನ ಬದುಕಿನ ಜ್ವಲಂತ ಸಮಸ್ಯೆಗಳ ಕುರಿತು ಚರ್ಚಿಸುವ ಸೂಕ್ತವೇದಿಕೆಯಾಗಿವೆ ಆದ್ದರಿಂದ ಪ್ರತಿ ವರ್ಷವೂ ಶಾಸನಸಭೆಗಳು ಕನಿಷ್ಠ 60 ದಿನಗಳ ಕಾಲ ಅಧಿವೇಶನ ನಡೆಸಿ ಪ್ರಜಾಪ್ರಭುತ್ವದ ಸಾರ್ಥಕತೆಗೆ ಮುಂದಾಗುವಲ್ಲಿ ಲೋಕಸಭೆ ಹಾಗೂ ರಾಜ್ಯಸಭೆಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಮನವಿ ಮಾಡಿದರು.

ಲೋಕ ಸಭಾಧ್ಯಕ್ಷರಾದ ಓಂಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ನಾರಾಯಣ ಸಿಂಗ್, ಕರ್ನಾಟಕ ವಿಧಾನ ಸಭಾಧ್ಯಕ್ಷ ಯು.ಟಿ. ಖಾದರ್, ಕರ್ನಾಟಕದ ಉಭಯ ಸದನದ ಕಾರ್ಯದರ್ಶಿಗಳಾದ ಕೆ.ಆರ್. ಮಹಾಲಕ್ಷ್ಮೀ, ವಿಶಾಲಾಕ್ಷಿ, ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ.ಮಹೇಶ ವಾಳ್ವೇಕರ್ ಸೇರಿದಂತೆ, ವಿವಿಧ ರಾಜ್ಯಗಳ ವಿಧಾನ ಸಭಾಧ್ಯಕ್ಷರು ಹಾಗೂ ಸಭಾಪತಿಗಳು ಸಮ್ಮೇಳನದಲ್ಲಿ ಪಾಲ್ಗೊಂಡಿದ್ದರು.